**<u>ವ್ಯಾಖ್ಯಾನ</u>**

# <u>ವಹವ್ವಾರೆ ಮೆಣಸಿನಕಾಯಿ</u>

**ವ್ಹಹವ್ವಾರೆ ಮೆಣಸಿನ ಕಾಯಿ**
**ಒಣರೊಟ್ಟಿಗೆ ತಂದೇನೋ ಕಾಯಿ II ಪ II**

**ಹುಟ್ಟುತಲಿ ಹಸಿರಾಗುತ ಕಂಡೆ**
**ನಟ್ಟ ನಡುವೆ ಕೆಂಪಾಗುತ ಕಂಡೆ**
**ಕಟ್ಟೆರಾಯನ ಬಹು ರುಚಿಯೆಂಬೆ II 1 II**

**ಒಂದೆರಡರೆದರೆ ಬಹು ರುಚಿಯೆಂಬೆ**
**ಮೇಲೆರಡರೆದರೆ ಬಹು ಖಾರೆಂಬೆ**
**ಅದು ಎರಡರೆದರೆ ಅತಿ ಖಾರೆಂಬೆ II 2 II**

**ಬಡವರಿಗೆಲ್ಲ ನಿನ್ನಾಧಾರಾ ಅಡಿಗೆ ಊಟಕ್ಕೆ ನಿನ್ನ ಸಾರ**
**ಬಾಯಲಿ ಕಡಿದರೆ ಬೆಂಕಿಯ ಖಾರ**
**ಪುರಂದರ ವಿಠ್ಠಲನ ನೆನೆಯೋದು ಭಾರ II 3 II**

**ವಹವ್ವಾರೆ ಮೆಣಸಿನಕಾಯಿ : -**

ಪ್ರತಿಯೊಬ್ಬ ಜೀವಿಗಳು ವಿಚಿತ್ರ ಸ್ವಭಾವವುಳ್ಳವರಾಗಿರುತ್ತಾರೆ. – ವಹವ್ವಾರೆ. "ಬಹು ಚಿತ್ರ ಜಗದ್ಬಹುದಾಕರಣಾತ್ ಪರಶಕ್ತಿರನಂತ ಗುಣ: ಪರಮ:". ಭೇದದಿಂದ ಕೂಡಿರುವ ಈ ಚಿತ್ರ ವಿಚಿತ್ರ ಜಗತ್ತನ್ನು ನೋಡಿಯಾದರೂ ಭಗವಂತನನ್ನು ಅರಿಯಬೇಕು. ದಪ್ಪ ಮೆಣಸಿನಕಾಯಿ, ಖಾರ ಮೆಣಸಿನಕಾಯಿ, ಚಿಕ್ಕ ಮೆಣಸಿನಕಾಯಿ, ಬೋಂಡ ಮೆಣಸಿನಕಾಯಿ, ಬ್ಯಾಡಗಿ ಮೆಣಸಿನಕಾಯಿ, ಗುಂಟೂರು ಮೆಣಸಿನಕಾಯಿ ವಿಚಿತ್ರ ಆಕಾರ – ರುಚಿ ಹೇಗೆ ಚಿತ್ರ ವಿಚಿತ್ರವಾಗಿರತ್ತೋ ಅದೇ ರೀತಿ ಜೀವಿಗಳೆಲ್ಲ ಸಾತ್ವಿಕ ರಾಜಸ ತಾಮಸವೆಂದು ಭಿನ್ನರಾಗಿರುತ್ತಾರೆ. ವಿವಿಧತೆ ಇರುತ್ತದೆ.

**ಒಣರೊಟ್ಟಿಗೆ ತಂದೆನೋ ತಾಯಿ : -**

ಒಣರೊಟ್ಟಿ – ಸಾರರಹಿತ ಸಂಸಾರ; ತಾಯಿ – ಪ್ರಕೃತಿ ಮಾತೆ, ಲಕ್ಷ್ಮೀದೇವಿ.

**ಹುಟ್ಟುತಲೀ ಹಸಿರಾಗುತ ಕಂಡೆ : –**

ಮೆಣಸಿನಕಾಯಿ ಹುಟ್ಟಿದಾಗ ಹಸಿರಾಗಿರುತ್ತೆ. ಹುಟ್ಟುವಾಗ (ಬಾಲ್ಯದಲಿ) ಸಂಸಾರದ ಹೊರೆ, ಮುಂದಿನ ಭಯ, ಯಾವುದೂ: ತಿಳಿಯದೆ ಜಗತ್ತು ಹಸಿರಾಗಿಯೇ ಕಂಡಿತು.

**ನಟ್ಟನಡುವೆ ಕೆಂಪಾಗುತ ಕಂಡೆ : –**

ನಟ್ಟನಡುವೆ ಅಂದರೆ ತಾರುಣ್ಯದಲ್ಲಿ – ಬಿಸಿ ರಕ್ತವಿರುತ್ತದೆ. ಮೆಣಸಿನಕಾಯಿ ಕೆಂಪಾಗಿರುತ್ತೆ. ಯೌವನ – ಕೋಪ ತಾಪಗಳ ಸಂಗಮ – ಲೌಕಿಕಾವಸ್ಥೆಯಲ್ಲಿ ಮುಳುಗಿ ಭಗವಂತನನ್ನೇ ಮರೆತಿರುತ್ತೇವೆ.

**ಕಟ್ಟೆರಾಯನ ಬಲುರುಚಿಯೆಂಬೆ : –**

ಕಟ್ಟೆರಾಯ ಅಂದರೆ ಭಗವಂತನಿರುವವರೆಗೂ ಯೌವ್ವನದ ಹಾರಾಟ ನಡೆಯುತ್ತಿರುತ್ತೆ. ತಟ್ಟೇರಾಯನಂತೆ ತಾನು ಅಸ್ವತಂತ್ರನಾದರೂ ಸ್ವತಂತ್ರನಾದ ಕಟ್ಟೆಯ (ಸಿಂಹಾಸನ) ಮೇಲೆ ಕುಳಿತಿರುವನಂತೆ ತಿಳಿದು ಹಾಳಾಗುವುದು. ಈ ಸಾಂಸಾರಿಕ ವಿಷಯ ವಸ್ತುಗಳು ವಿಷದಂತಿದ್ದರೂ ಅರ್ಥವಾಗದೆ ಬಲುರುಚಿಯಾಗಿದೆ ಎಂದೇ ಭ್ರಮಿಸುವೆವು. ಇದನ್ನೇ ಕಟ್ಟೇರಾಯನಿಗೆ ಬಲುರುಚಿಯೆಂಬೆ ಎಂದಿದ್ದಾರೆ.

**ಒಂದೆರಡೆರೆದರೆ ಬಹುರುಚಿಯೆಂಬೆ : –**

(ಒಂದು + ಎರಡು = ಮೂರು) ಈ ಸಂಸಾರದಲ್ಲಿ ಯೌವ್ವನ, ಮದದ ಜೊತೆಗೆ ಹಾಳು ಮಾಡಲು ಕಾಮ, ಕ್ರೋಧ, ಲೋಭಗಳು (ಅಂದರೆ ಒಂದರ ಜೊತೆಗೆ ಇನ್ನೊಂದೆರಡು ಮೆಣಸಿನಕಾಯಿ ಸೇರಿಸಿದರೆ) ಬಹುರುಚಿಯೆಂಬಂತೆ ಇರುತ್ತೆ ಈ ಸಂಸಾರ.

**ಅದು ಎರಡೆರದರೆ ಅತಿ ಖಾರೆಂಬೆ : –**

ಈ ಕಾಮ ಕ್ರೋಧಾದಿಗಳ ಜೊತೆ ಇನ್ನೂ ಎರಡು ಮೆಣಸಿನಕಾಯಿ ಸೇರಿದರೆ (೩ . ೨ = ೬) ಕಾಮ ಕ್ರೋಧಾದಿ ಆರು ಸೇರಿದರೆ, ಭಗವಂತನ ಸ್ಮರಣೆಯೇ ಇಲ್ಲದೇ ತಾನೇ ಸರ್ವ ಸ್ವತಂತ್ರವೆಂಬ ದುರಹಂಕಾರ ಬಂದು ಮೆರೆವಾಗ, ಇನ್ನೊಬ್ಬ ಬಲಿಷ್ಠನಿಂದ ಅವಮಾನವಾದಾಗ ಬಹುಖಾರೆಂಬ ಅವಮಾನವಾಯಿತು.

**ಅದು ಎರಡೆರದರೆ ಅತಿ ಖಾರೆಂಬೆ : –**

ಈ ಕಾಮ ಕ್ರೋಧಾದಿಗಳ ಜೊತೆಗೆ ಇನ್ನೂ ಎರಡು ಮೆಣಸಿನಕಾಯಿಗಳು ಸೇರಿದರೆ (೬ + ೨ = ೮), ಅಷ್ಟ ಮದಗಳೂ ಸೇರಿದ್ದರೆ, ಅಂದರೆ ಯೌವ್ವನ, ಧನ, ಅಧಿಕಾರ, ಅವಿವೇಕಾದಿಗಳೂ ಸೇರಿದ್ದರೆ; ಇವುಗಳಲ್ಲಿ ಒಂದೊಂದಿದ್ದರೂ ಅನರ್ಥಕಾರಿ. ಎಲ್ಲವೂ ಸೇರಿದರೆ ಕೇಳುವುದೇ ಬೇಡ.

**ಬಡವರಿಗೆಲ್ಲಾ ನಿನ್ನಾಧಾರ : –**

ಭಗವಂತನ ಭಕ್ತರಾದ ಕುಚೇಲ ಮೊದಲಾದವರಿಗೆಲ್ಲ ನಿನ್ನ ನಾಮವೇ ಆಧಾರ. ಭೋಜನ ಮಾಡುವಾಗಲೂ ಗೋವಿಂದ ಎಂದು ಉಚ್ಚರಿಸುತ್ತಾ ಭುಂಜಿಸಬೇಕು. ಅಡಿಗೆ ಮಾಡುವಾಗಲೂ ಭಗವಂತನ ನಾಮೋಚ್ಚಾರಣ ಪೂರ್ವಕ ಮಾಡಬೇಕು.

**ಬಾಯಲ್ಲಿ ಕಡಿದರೆ ಬೆಂಕಿಯ ಖಾರ : –**

ಬಾಯಲ್ಲಿ ಮೆಣಸಿನಕಾಯಿ ಕಡಿದರೆ ಹೇಗೆ ಖಾರದಿಂದ ಭಗವಂತನ ಸ್ಮರಣೆ ಕಷ್ಟವೋ, ಹಾಗೆ ಸಂಸಾರಿಕ ವಿಷಗಳಿಂದ ಕಾಮ ಕ್ರೋಧಾದಿ ಕಿಚ್ಚುಗಳಿಂದ ಪುರಂದರ ವಿಠಲನ ನೆನೆಯೋದು ಅತಿ ಪ್ರಯಾಸಕರವಾದದ್ದು. ಆದ್ದರಿಂದ ಈ ಮೆಣಸಿನಕಾಯಿಯಂತೆ ಭಗವಂತರನ್ನು ಮರೆಸುವ ಈ ವಿಷಯ ಪದಾರ್ಥಗಳನ್ನು ತೊರೆದು, ಭಗವನ್ನಾಮಾಮೃತವನ್ನು ಪಾನ ಮಾಡಿರಿ ಎಂದಿದ್ದಾರೆ ಪುರಂದರ ದಾಸರು.

## ಶ್ರೀ ಕೃಷ್ಣಾರ್ಪಣಮಸ್ತು

**ಲೇಖಕರು:** Dr. ವಿಜೇಯೇಂದ್ರ ದೇಸಾಯಿ, ಧಾರವಾಡ